All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

16.01.2025 2.30 p.m.

***************

ಮುಖ್ಯಾಂಶಗಳು

- ಬಾಹ್ಯಾಕಾಶದಲ್ಲಿ ಇತಿಹಾಸ ಸೃಷ್ಟಿಸಿದ ಇಸ್ರೋ ; ಸ್ಪೇಸ್ ಡಾಕಿಂಗ್ ಪ್ರಯೋಗ ಯಶಸ್ವಿ
- ರೈತರಿಗೆ ಆರ್ಥಿಕ ಭದ್ರತೆ ಅತ್ಯಗತ್ಯ ; ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಪ್ರತಿಪಾದನೆ
- ಪಕ್ಷದಲ್ಲಿ ಎಲ್ಲರೂ ಶಿಸ್ತು ಕಾಪಾಡಬೇಕು ; ಬಹಿರಂಗ ಚರ್ಚೆ ನಡೆಸದಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ
- ಬೆಂಗಳೂರಿನಲ್ಲಿ ಅಮೆರಿಕ ರಾಯಭಾರಿ ಕಚೇರಿ ನಾಳೆ ಕಾರ್ಯಾರಂಭ

****************

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ಸ್ಪೇಸ್ ಡಾಕಿಂಗ್ ಪ್ರಯೋಗ - ಸ್ಪೇಡೆಕ್ಸ್ ಅಡಿಯಲ್ಲಿ ಎರಡು ಉಪಗ್ರಹಗಳನ್ನು ಬಾಹ್ಯಾಕಾಶದಲ್ಲಿ ಯಶಸ್ವಿಯಾಗಿ ಡಾಕ್ ಮಾಡುವ ಮೂಲಕ ಅಂದರೆ ಜೋಡಿಸುವ ಮೂಲಕ ಇತಿಹಾಸ ಸೃಷ್ಟಿಸಿದೆ. ಈ ಮೂಲಕ ಅಮೆರಿಕ, ರಷ್ಯಾ ಮತ್ತು ಚೀನಾ ನಂತರ ಈ ಸಾಧನೆ ಮಾಡಿದ ನಾಲ್ಕನೇ ರಾಷ್ಟ್ರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಇಸ್ರೋದ ಈ ಸಾಧನೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಉಪಗ್ರಹಗಳ ಸ್ಪೇಸ್ ಡಾಕಿಂಗ್ ಪ್ರಯೋಗವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಇಸ್ರೋದ ವಿಜ್ಞಾನಿಗಳು ಹಾಗೂ ಬಾಹ್ಯಾಕಾಶ ಸಂಶೋಧನೆಯಲ್ಲಿ ತೊಡಗಿರುವ ಎಲ್ಲರನ್ನು ಪ್ರಧಾನಿ ಅಭಿನಂದಿಸಿದ್ದಾರೆ.

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಇಸ್ರೋ ವಿಜ್ಞಾನಿಗಳ ಈ ಸಾಧನೆ ಅವಿಸ್ಮರಣೀಯ ಎಂದು ಶ್ಲಾಘಿಸಿದ್ದಾರೆ.

ಭಾರತೀಯ ಅಂತರಿಕ್ಷ ನಿಲ್ದಾಣ, ಚಂದ್ರಯಾನ-೪ ಮತ್ತು ಗಗನಯಾನದಂತಹ ಭವಿಷ್ಯದ ಯೋಜನೆಗಳನ್ನು ಸುಸೂತ್ರವಾಗಿ ಕೈಗೆತ್ತಿಕೊಳ್ಳಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

****************

ರೈತರ ಸಂಕಷ್ಟಕ್ಕೆ ಸರ್ಕಾರಗಳು ಗಮನ ಹರಿಸಬೇಕಾಗಿದ್ದು, ರೈತರಿಗೆ ಆರ್ಥಿಕ ಭದ್ರತೆ ಅಗತ್ಯ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಪ್ರತಿಪಾದಿಸಿದ್ದಾರೆ. ಧಾರವಾಡ ಕೃಷಿ ವಿಜ್ಞಾನ

ವಿಶ್ವವಿದ್ಯಾಲಯದಲ್ಲಿ ನಡೆದ ಅಮೃತ ಮಹೋತ್ಸವ ಮತ್ತು ಹಳೆಯ ವಿದ್ಯಾರ್ಥಿಗಳ ಸಮಾವೇಶದಲ್ಲಿ ಮಾತನಾಡಿದ ಅವರು, ಭಾರತ ಇನ್ನೆರಡು ವರ್ಷಗಳಲ್ಲಿ ೩ನೇ ಅತಿದೊಡ್ಡ ಜಾಗತಿಕ ಆರ್ಥಿಕತೆಯಾಗಿ ಪರಿವರ್ತನೆಗೊಳ್ಳಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಖಾಸಗಿ ಕಂಪನಿಗಳು ತಮ್ಮ ಸಿಎಸ್‌ಆರ್ ನಿಧಿಯಿಂದ ಕೃಷಿ ಸಂಶೋಧನೆಗೆ ಆರ್ಥಿಕ ನೆರವು ನೀಡುವಂತಾಗಬೇಕು. ವಿಶ್ವವಿದ್ಯಾಲಯಗಳು ಸಿಎಸ್‌ಆರ್ ನಿಧಿ ಪಡೆದು ರೈತರಿಗೆ ಉಪಯುಕ್ತ ತಂತ್ರಜ್ಞಾನ ಅಭಿವೃದ್ಧಿಯಾಗುವಂತೆ ವ್ಯವಸ್ಥೆ ಕಲ್ಪಿಸಬೇಕು ಎಂದು ಕರೆ ನೀಡಿದ್ದಾರೆ.

ಧ್ವನಿ: ಜಗದೀಪ್ ಧನ್‌ಕರ್

ಇದೇ ವೇಳೆ ಅರಿಶಿಣವು ಅಪಾರ ಔಷಧಿಯ ಮೌಲ್ಯವನ್ನು ಹೊಂದಿದ್ದು, ಮುಂದಿನ ೫ ವರ್ಷಗಳಲ್ಲಿ ಕೇಂದ್ರ ಸರ್ಕಾರ ಉತ್ಪಾದನೆಯನ್ನು ದ್ವಿಗುಣಗೊಳಿಸುವ ಗುರಿ ಹೊಂದಿದೆ ಎಂದಿದ್ದಾರೆ.

ಇಂದು ಅವರು ಹುಬ್ಬಳ್ಳಿಯ ವರೂರ ನವಗ್ರಹ ತೀರ್ಥಕ್ಷೇತ್ರದಲ್ಲಿ ನಡೆಯುತ್ತಿರುವ ಪಂಚ ಕಲ್ಯಾಣಕ ಪ್ರತಿಷ್ಠಾ ಮಹಾ ಮಹೋತ್ಸವದಲ್ಲಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಭಾಗವಹಿಸಲು ಬೆಳಗ್ಗೆ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಉಪರಾಷ್ಟ್ರಪತಿಯವರನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಸಚಿವ ಸಂತೋಷ್ ಲಾಡ್ ಹಾಗೂ ಮತ್ತಿತರ ಅಧಿಕಾರಿಗಳು ಆತ್ಮೀಯವಾಗಿ ಸ್ವಾಗತಿಸಿದರು.

***************

ಕೆಪಿಸಿಸಿ ಅಧ್ಯಕ್ಷರ ಹುದ್ದೆ ಮಾಧ್ಯಮಗಳಲ್ಲಿ ಮಾತನಾಡಿದರೆ ಸಿಗುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಕೆಪಿಸಿಸಿ ಅಧ್ಯಕ್ಷರ ಹುದ್ದೆ ಬದಲಾವಣೆ ಚರ್ಚೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಪಕ್ಷದ ವಿಚಾರವಾಗಿ ಯಾವುದೇ ಬೆಳವಣಿಗೆ ಇದ್ದರೂ ಮಾಹಿತಿ ನೀಡಲಾಗುವುದು ಎಂದು ಹೇಳಿದ್ದಾರೆ.

ಪಕ್ಷದಲ್ಲಿ ಎಲ್ಲರು ಶಿಸ್ತು ಕಾಪಾಡಬೇಕು, ಯಾವುದೇ ವಿಚಾರವಾಗಿ ಬಹಿರಂಗವಾಗಿ ಚರ್ಚೆ ಮಾಡದಂತೆ ಮುಖ್ಯಮಂತ್ರಿಗಳು ಹಾಗೂ ಪಕ್ಷದ ಪ್ರಧಾನ ಕಾರ್ಯದರ್ಶಿಗಳು ಈಗಾಗಲೇ ಸೂಚಿಸಿದ್ದು, ಪಕ್ಷ ಉಳಿಸುವಂತೆ ಸಲಹೆ ನೀಡಿದ್ದಾರೆ.

ಯಾರಿಗಾದರೂ ಪಕ್ಷದೊಳಗೆ ಏನಾದರೂ ಸಮಸ್ಯೆ ಇದ್ದರೆ, ಹೈಕಮಾಂಡ್ ಜತೆ ಚರ್ಚಿಸಿ, ಬಗೆಹರಿಸಿಕೊಳ್ಳಬೇಕಾಗಿ ಎಂದು ಸಲಹೆ ನೀಡಿದ್ದಾರೆ.

***************

ಲಾಲ್‌ಬಾಗ್‌ನಲ್ಲಿಂದು ಗಣರಾಜ್ಯೋತ್ಸವದ ಪ್ರಯುಕ್ತ ಮಹರ್ಷಿ ವಾಲ್ಮೀಕಿ ವಿಷಯಾಧಾರಿತ ೨೧೭ನೇ ಫಲಪುಷ್ಪ ಪ್ರದರ್ಶನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ವಾಲ್ಮೀಕಿ ಗುರುಪೀಠದ ಸ್ವಾಮೀಜಿಗಳು, ತೋಟಗಾರಿಕಾ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ವಸತಿ ಸಚಿವ ಜಮೀರ್ ಅಹಮದ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಉಪಸ್ಥಿತರಿದ್ದರು.

***************

ಬೆಂಗಳೂರಿನಲ್ಲಿ ಅಮೆರಿಕದ ದೂತವಾಸ ಕಚೇರಿ ನಿರ್ಮಿಸಬೇಕೆಂಬ ಬಹುಕಾಲದ ಬೇಡಿಕೆಯ ಕನಸು ನಾಳೆ ನನಸಾಗಲಿದೆ ಎಂದು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಘೋಷಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಇದನ್ನು ಸಾಧ್ಯವಾಗಿಸಿದ ಪ್ರಧಾನಿ ನರೇಂದ್ರ ಮೋದಿ ಮತ್ತು ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರನ್ನು ಶ್ಲಾಘಿಸಿದ್ದಾರೆ. ಈ ಸಂಬಂಧ ವಿದೇಶಾಂಗ ಸಚಿವ ಜೈಶಂಕರ್ ಅವರನ್ನು ಭೇಟಿಯಾಗಿ ಮೈಸೂರುಪಾಕ್ ನೀಡಿ ಕೃತಜ್ಞತೆ ಸಲ್ಲಿಸಿದ್ದಾರೆ.

ಭಾರತದಲ್ಲಿನ ಅಮೆರಿಕದ ರಾಯಭಾರಿ ಎರಿಕ್ ಗಾರ್ಸೆಟ್ಟಿ ರಾಯಭಾರ ಕಚೇರಿಯನ್ನು ನಾಳೆ ಬೆಂಗಳೂರಿನಲ್ಲಿ ಉದ್ಘಾಟಿಸಲಿದ್ದಾರೆ. ಜೆಡಬ್ಲ್ಯೂ ಮ್ಯಾರಿಯೇಟ್ ಹೋಟೇಲ್‌ನಲ್ಲಿ ದೂತವಾಸ ಕಚೇರಿ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸಲಿದ್ದು, ಬಳಿಕ ಶಾಶ್ವತ ಕಚೇರಿಗೆ ಸ್ಥಳಾಂತರ ಗೊಳ್ಳಲಿದೆ.

ಬೆಂಗಳೂರಿನಲ್ಲಿ ಅಮೆರಿಕ ದೂತವಾಸ ಕಚೇರಿ ಸ್ಥಾಪಿಸುವುದು ಬಹುಕಾಲದ ಬೇಡಿಕೆಯಾಗಿತ್ತು. ಇಲ್ಲಿಯವರೆಗೆ ಕರ್ನಾಟಕದ ಜನತೆ ಅಮೆರಿಕ ವೀಸಾ ಪಡೆಯಲು ಚೆನ್ನೈ ಅಥವಾ ಹೈದರಾಬಾದ್‌ಗೆ ತೆರಳುತ್ತಿದ್ದರು.

ಈ ದೂತವಾಸ ಕಚೇರಿಯಿಂದ ಬೆಂಗಳೂರಿನ ಉದ್ಯಮಿಗಳು, ವಿದ್ಯಾರ್ಥಿಗಳಿಗೆ ಬಹುರಾಷ್ಟ್ರೀಯ ಕಂಪನಿಯಲ್ಲಿ ಕಾರ್ಯನಿರ್ವಹಿಸುವ ಲಕ್ಷಾಂತರ ಉದ್ಯೋಗಿಗಳಿಗೆ ಸಹಾಯವಾಗಲಿದೆ.

****************

ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕು ಜಿನಗಲಕುಂಟೆ ಅರಣ್ಯ ಪ್ರದೇಶದ, ಹೊಸಹುಡ್ಯ ಗ್ರಾಮದ ಸರ್ವೆ ನಂ ೧ ಮತ್ತು ೨ ರಲ್ಲಿನ ೬೧ ಎಕರೆ ಭೂ ಒತ್ತುವರಿ ಕುರಿತ ಜಂಟಿ ಸರ್ವೇ ಕಾರ್ಯ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ನೇತೃತ್ವದಲ್ಲಿ ಮುಂದುವರೆದಿದೆ. ಸ್ಥಳದಲ್ಲಿ ೧೫೦ಕ್ಕೂ ಹೆಚ್ಚು ಪೊಲೀಸರಿಂದ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿದೆ.

ನ್ಯಾಯಾಲಯದ ಸೂಚನೆ ಮೇರೆಗೆ ಜಂಟಿ ಸರ್ವೇ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಸರ್ವೇಗೆ ಸಹಕಾರ ನೀಡುವುದಾಗಿ ತಿಳಿಸಿರುವ ಮಾಜಿ ಸ್ಪೀಕರ್ ರಮೇಶ್ ಕುಮಾರ್, ೨೦೦೨ ಮತ್ತು ೨೦೦೮ ರಲ್ಲಿ ಸರ್ವೆ ಮಾಡಬೇಕೆಂದು ತಾವೇ ಅರ್ಜಿ ಸಲ್ಲಿಸಿರುವುದಾಗಿ ಹೇಳಿದ್ದಾರೆ

****************

ದಾವಣಗೆರೆ ಸಮೀಪದ ಆವರಗೊಳ್ಳದಲ್ಲಿರುವ ಘನತ್ಯಾಜ್ಯ ವಿಲೇವಾರಿ ಮತ್ತು ಸಂಗ್ರಹ ಘಟಕದಲ್ಲಿ ಪದೇ ಪದೇ ಸಂಭವಿಸುತ್ತಿರುವ ಅಗ್ನಿ ಅವಘಡ ತಪ್ಪಿಸಲು ಕ್ರಿಯಾ ಯೋಜನೆ ಸಿದ್ಧಪಡಿಸುವಂತೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಅಗ್ನಿ ಅವಘಡ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ೬ ತಿಂಗಳಲ್ಲಿ ಘನತ್ಯಾಜ್ಯವನ್ನು ಬೇರ್ಪಡಿಸಿದರೆ ಅಗ್ನಿ ಅವಘಡ ತಪ್ಪಿಸಬಹುದಾಗಿದೆ ಎಂದು ಸಲಹೆ ನೀಡಿದ್ದಾರೆ.

ಅಗ್ನಿ ಅನಾಹುತಗಳಿಗೆ ಕಾರಣ ಪತ್ತೆ ಹಚ್ಚಲು ಸಿಸಿ ಟಿವಿ ಕ್ಯಾಮೆರಾ ಅಳವಡಿಸುವುದು ಮತ್ತು ಹೊಸ ಜಾಗ ಖರೀದಿಗೆ ಕ್ರಿಯಾ ಯೋಜನೆ ಸಿದ್ಧಪಡಿಸುವಂತೆ ದಾವಣಗೆರೆ ಜಿಲ್ಲಾಧಿಕಾರಿ ಸೂಚನೆ ನೀಡಿದ್ದಾರೆ.

****************

ಜೆಡಿಎಸ್ ಮುಖಂಡ ಪಟೇಲ್ ಶಿವರಾಂ ನಿಧನ ಹೊಂದಿದ ಹಿನ್ನೆಲೆಯಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಅಂತಿಮ ದರ್ಶನ ಪಡೆದರು.

ಈ ವೇಳೆ ಮಾತನಾಡಿದ ಅವರು, ಪಟೇಲ್ ಶಿವರಾಂ ಹಾಸನ ಜಿಲ್ಲೆಯಲ್ಲಿ ನಿಷ್ಠಾವಂತ ಪ್ರಾಮಾಣಿಕ ರಾಜಕಾರಣಿಯಾಗಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾಗಿ ಜೊತೆಗೆ ವಿವಿಧ ಸ್ಥಾನಗಳನ್ನು ಅಲಂಕರಿಸಿ ನಿಸ್ವಾರ್ಥ ಸೇವೆ ಸಲ್ಲಿಸಿದ್ದರು. ಅವರ ಅಕಾಲಿಕ ಕಾರಣ ಜಿಲ್ಲೆಗೆ ಹಾಗೂ ಜೆಡಿಎಸ್ ಪಕ್ಷಕ್ಕೆ ತುಂಬಲಾರದ ನಷ್ಟ ಉಂಟಾಗಿದೆ ಎಂದರು.

****************

ಸಂಕ್ಷಿಪ್ತ ಸುದ್ದಿಗಳು

- ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದಲ್ಲಿರುವ ಕೆ.ಆರ್.ಎಸ್. ಅಣೆಕಟ್ಟೆಯಲ್ಲಿ ಬೃಂದಾವನ ಉದ್ಯಾನವನವನ್ನು ಅಮ್ಯೂಸ್ಮೆಂಟ್ ಪಾರ್ಕ್ ಆಗಿ ಉನ್ನತೀಕರಿಸಲು ನಿರ್ಧರಿಸಲಾಗಿದೆ. ಈ ಹಿನ್ನೆಲೆಯಲ್ಲಿ ೨೪ ಎಕರೆ ಭೂಮಿಯನ್ನು  ಭೂಸ್ವಾಧೀನ ಪಡಿಸಲು ಜಿಲ್ಲಾಧಿಕಾರಿ ಡಾ.ಕುಮಾರ ಅವರು  ಕೆ.ಆರ್.ಎಸ್ ಕಚೇರಿ ಸಭಾಂಗಣದಲ್ಲಿ ರೈತರೊಂದಿಗೆ ಸಭೆ ನಡೆಸಿದರು.
- ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ರಾಜ್ಯದ ವಿವಿಧ ಸ್ಥಳಗಳಲ್ಲಿ ನಡೆಸುತ್ತಿರುವ ಕ್ರೀಡಾಶಾಲೆ ಹಾಗೂ ಕ್ರೀಡಾ ನಿಲಯಗಳಿಗೆ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ, ಪ್ರವೇಶ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದು ದಾವಣಗೆರೆ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ರೇಣುಕಾ ತಿಳಿಸಿದ್ದಾರೆ.
- ವಿಜಯನಗರ ಜಿಲ್ಲೆಯ ದಿಶಾ ಸಭೆಯನ್ನು ಇದೇ ೨೦ರಂದು ಹಗರಿಬೊಮ್ಮನಹಳ್ಳಿ ತಾಲೂಕು ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೋಂಗ್ಜಾಯ ಮೊಹಮ್ಮದ್ ಅಲಿ ಅಕ್ರಮ್ ಷಾ ತಿಳಿಸಿದ್ದಾರೆ.
- ಕರ್ನಾಟಕ ಲೋಕಸೇವಾ ಆಯೋಗವು ವಿವಿಧ ಇಲಾಖೆಗಳ ಗ್ರೂಪ್ 'ಬಿ' ವೃಂದದ ಹುದ್ದೆಗಳ ನೇಮಕಾತಿ ಸಂಬಂಧ ಇದೇ ೧೯ ಮತ್ತು ೨೫ ರಂದು ಪರೀಕ್ಷೆಗಳನ್ನು ನಡೆಸಲಿದ್ದು, ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಸೂಚನೆ ನೀಡಿದ್ದಾರೆ.
- ೨೦೨೫ನೇ ಸಾಲಿನ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಕಾರ್ಯಕ್ರಮದ ಅಂಗವಾಗಿ, ಕೋಲಾರದ ಬೆಮೆಲ್ ಕಾರ್ಖಾನೆ ನೌಕರರಿಗೆ ರಸ್ತೆ ಸುರಕ್ಷತೆ ಹಾಗೂ ಸಂಚಾರ ನಿಯಮ ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು.
- ರಾಜ್ಯದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ನಾಳೆ ಬಳ್ಳಾರಿ ಜಿಲ್ಲೆಯಲ್ಲಿ ಒಂದು ದಿನದ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

********ಮುಕ್ತಾಯ*******